# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | **760 (754)** |
| ಸದಸ್ಯರ ಹೆಸರು: | ಡಾ. ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ: | 16.12.2024 |
| ಉತ್ತರಿಸುವ ಸಚಿವರು : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ವಿವರ |
|---|---|---|
| ಅ) | ಕಳೆದ ಐದು ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಎಷ್ಟು ಜನ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ; (ವಿವರ ನೀಡುವುದು) | ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡಿರುವುದಿಲ್ಲ.<br><br>**ಪದವಿಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ:-**<br><br>ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕಳೆದ ಐದು ವರ್ಷಗಳಲ್ಲಿ 6 ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ.<br><br>ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಕಳೆದ ಐದು ವರ್ಷಗಳಲ್ಲಿ 89 ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ. |
| ಆ) | ಮಕ್ಕಳ ಆರೋಗ್ಯಕ್ಕೆ ಮತ್ತು ಕ್ರೀಡಾ ಸ್ಪರ್ದೆಗಳಿಗೆ ಪೂರಕವಾಗುವ ದೈಹಿಕ ಶಿಕ್ಷಕರನ್ನು ನೇಮಕ ಮಾಡಿಕೊಳ್ಳದೆ ನಿರ್ಲಕ್ಷ್ಯ ತೋರುತ್ತಿರುವುದಕ್ಕೆ ಕಾರಣಗಳೇನು; | **ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-**<br><br>ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್-2 ವೃಂದದ 6772 ಹುದ್ದೆಗಳು ಮಂಜೂರಾಗಿವೆ. ಈ ಹುದ್ದೆಗಳ ಪೈಕಿ ಸರ್ಕಾರದ ಆದೇಶ ಸಂಖ್ಯೆ ಇಪಿ 230 ಪಿಬಿಎಸ್ 2024 ದಿನಾಂಕ 07.10.2024 ರನ್ವಯ ಕಲ್ಯಾಣ ಕರ್ನಾಟಕ 07 ಜಿಲ್ಲೆಗಳ ಖಾಲಿ ಇರುವ 380 ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ತಿದ್ದುಪಡಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>**ಸರ್ಕಾರಿ ಪೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br><br>ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ |
| ಇ) | ಆರ್ಥಿಕ ಇಲಾಖೆ ಅನುಮತಿ ಇರುವುದಿಲ್ಲವೆಂದು ನೆಪ ಹೇಳಿ ಇಲಾಖೆ ಸಾವಿರಾರು ದೈಹಿಕ ಶಿಕ್ಷಣ ಪದವಿ ಪಡೆದು ಅವಕಾಶಕ್ಕಾಗಿ ಕಾಯುತ್ತಿರುವ ಯುವಕರ ಭವಿಷ್ಯಕ್ಕೆ ತೊಂದರೆಯುಂಟು ಮಾಡುತ್ತಿರುವುದು ಸರಿಯೇ; ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ತಕ್ಷಣವೇ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು? | |

| | | |
|---|---|---|
| ಈ) | ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ತಕ್ಷಣವೇ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದೇ? | ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ4(1)ಸ.ಪ್ರೌ.ಶಾ.ಶಿನೇ/46/2021-22/ಇ-1407683, ದಿನಾಂಕ:22/05/2024ರ ಕಡತವನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್2024 ದಿನಾಂಕ:07.10.2024 ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರೌಢ ಶಾಲಾ ಸಹ ಶಿಕ್ಷಕರ ಒಟ್ಟು ಹುದ್ದೆಗಳಲ್ಲಿ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.<br><br>ಪ್ರಸ್ತುತ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತ ದೃಷ್ಟಿಯಿಂದ ಖಾಯಂ ಹುದ್ದೆ ಭರ್ತಿ ಆಗುವವರೆಗೂ ಅಥವಾ ಶೈಕ್ಷಣಿಕ ಸಾಲಿನ ಅಂತ್ಯದವರೆಗೂ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲಾಗಿದೆ.<br><br>**ಸರ್ಕಾರಿ ಪದವಿಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ:-**<br><br>ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಮಂಜೂರಾತಿ ಇದ್ದು, ಇದರಲ್ಲಿ 10 ಹುದ್ದೆಗಳು ನೇರ ನೇಮಕಾತಿಗೆ ಮೀಸಲಾಗಿರುತ್ತದೆ. ಈ ಹುದ್ದೆಗಳನ್ನು ಕೇಂದ್ರೀಕೃತ ದಾಖಲಾತಿ ಘಟಕದ ವತಿಯಿಂದ ಭರ್ತಿಗೆ ಕ್ರಮವಹಿಸಲಾಗುತ್ತಿದೆ.<br><br>ಉಳಿದ ಹತ್ತು ಹುದ್ದೆಗಳು ಬಡ್ತಿಗೆ ಮೀಸಲಾಗಿರುತ್ತದೆ. ಇದರಲ್ಲಿ 6 ಹುದ್ದೆಗಳು ಭರ್ತಿಯಾಗಿದ್ದು, ಉಳಿದ 04 ಹುದ್ದೆಗಳ ಭರ್ತಿಗಾಗಿ ಆಯುಕ್ತ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಂದ ಮಾಹಿತಿ ಕೋರಲಾಗಿರುತ್ತದೆ.<br><br>120 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳ ಸಂಖ್ಯಾಬಲ ಹೊಂದಿರುವ 778 ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಮಂಜೂರಾತಿ ನೀಡುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ |

| | | |
|---|---|---|
| | | ಪರಿಶೀಲನೆಯಲ್ಲಿರುತ್ತದೆ. ಪದವಿಪೂರ್ವ ಕಾಲೇಜಿನಲ್ಲಿನ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಲ್ಲಿ ಒಬ್ಬ ಸೂಕ್ತ ಉಪನ್ಯಾಸಕರಿಗೆ ಕ್ರೀಡಾ ಚಟುವಟಿಕೆಗಳನ್ನು ನಿರ್ವಹಿಸುವಂತೆ ಪ್ರಾರಂಭದಲ್ಲಿಯೇ ನಿಗದಿಪಡಿಸಲಾಗಿರುತ್ತದೆ. ಶೈಕ್ಷಣಿಕ ವರ್ಷದ ಕಾರ್ಯವನ್ನು ಮತ್ತು ಹತ್ತಿರದ ಶಾಲಾ/ಕಾಲೇಜುಗಳಲ್ಲಿನ ದೈಹಿಕ ಉಪನ್ಯಾಸಕರಿಂದ ತಾಲ್ಲೂಕು, ಜಿಲ್ಲಾ ಮತ್ತು ವಿವಿಧ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲು ವಿದ್ಯಾರ್ಥಿಗಳಿಗೆ ಸೂಕ್ತ ತರಬೇತಿ ನೀಡಲಾಗುತ್ತದೆ.<br><br>ಆದರೆ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೆನೆನಿ 2024 ದಿನಾಂಕ:25.11.2024 ರನ್ವಯ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ.<br><br>**ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ:-**<br><br>ಸರ್ಕಾರದ ವಿವಿಧ ಆದೇಶಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಹಾಗೂ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ ದೈಹಿಕ ಶಿಕ್ಷಣ ಉಪನ್ಯಾಸಕರುಗಳನ್ನು ನೇಮಕ ಮಾಡಿ ಅನುದಾನಕ್ಕೆ ಒಳಪಡಿಸಲಾಗುತ್ತಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನೇಮಕವಾಗಿರುವ ಉಪನ್ಯಾಸಕರುಗಳ ಸೇವೆಯನ್ನು ಜಿಲ್ಲಾ ಹಂತದಲ್ಲಿರುವ ಎಲ್ಲಾ ಅನುದಾನಿತ ಕಾಲೇಜುಗಳಿಗೆ ಉಪಯುಕ್ತವಾಗುವಂತೆ ಸಮರ್ಪಕವಾಗಿ ಬಳಕೆ ಮಾಡಲಾಗುತ್ತಿದೆ.<br><br>ಕಾಲ ಕಾಲಕ್ಕೆ ಕ್ರೀಡಾ ಚಟುವಟಿಕೆಗಳಲ್ಲಿ ಇಚ್ಚಾಶಕ್ತಿ ಮನೋಭಾವವನ್ನು ವಿದ್ಯಾರ್ಥಿಗಳಲ್ಲಿ ಹೆಚ್ಚಿಸುವ ಸಲುವಾಗಿ ಇಲಾಖೆಯಿಂದ ಪ್ರತಿ ಶೈಕ್ಷಣಿಕ ವರ್ಷದಲ್ಲಿ ತಾಲ್ಲೂಕು ಹಂತದಿಂದ ರಾಷ್ಟ್ರ ಹಂತದವರೆಗೆ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದ್ದು, ಈ ಕಾರ್ಯದಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಸೂಕ್ತ ರೀತಿಯಲ್ಲಿ ತರಬೇತಿ ನೀಡಲಾಗುತ್ತಿದೆ. |

ಸಂಖ್ಯೆ: ಇಪಿ 305 ಎಲ್‌ಬಿಪಿ 2024

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**